# <u>ಕರ್ನಾಟಕ ಸರ್ಕಾರದ ನಡವಳಿಗಳು</u>
## <u>ಜಲಸಂಪನ್ಮೂಲ ಇಲಾಖೆ</u>

**ವಿಷಯ:-** ಕೊಪ್ಪಳ ಜಿಲ್ಲೆಯ, ಗಂಗಾವತಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಮುಕ್ಕುಂಪಿ ಕೆರೆ ಹಾಗೂ ಇತರೆ 05 ಕೆರೆಗಳಿಗೆ ತುಂಗಭದ್ರಾ ನದಿಯಿಂದ ದೇವಿಘಾಟ್/ವಿಪ್ರಾ ಸ್ಥಳದಿಂದ ನೀರು ತುಂಬಿಸುವ, 2018-19 ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.93.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ ತುಂಗಭದ್ರಾ – ಕೆರೆ ತುಂಬಿಸುವ ಯೋಜನೆ/ ಡಿ.ಪಿ.ಆರ್/2020/3924, ದಿನಾಂಕ:12.11.2020 ಹಾಗೂ ಪತ್ರ ಸಂಖ್ಯೆ:6206, ದಿನಾಂಕ:06.01.2021.

---***---

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರಗಳಲ್ಲಿ, ಕೊಪ್ಪಳ ಜಿಲ್ಲೆಯ, ಗಂಗಾವತಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಮುಕ್ಕುಂಪಿ ಕೆರೆ ಹಾಗೂ ಇತರೆ 05 ಕೆರೆಗಳನ್ನು ತುಂಗಭದ್ರಾ ನದಿಯಿಂದ ದೇವಿಘಾಟ್/ವಿಪ್ರಾ ಸ್ಥಳದಿಂದ 0.105 ಟಿಎಂಸಿ ನೀರು ತುಂಬಿಸುವುದರಿಂದ ಅಂತರ್ಜಲ ಮಟ್ಟ ಹೆಚ್ಚಳ ಮತ್ತು ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಉದ್ದೇಶಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಸದರಿ ಯೋಜನೆಯ ರೂ.93.00 ಕೋಟಿಗಳ ವಿವರವಾದ ಯೋಜನಾ ವರದಿಯನ್ನು ದಿನಾಂಕ:03.07.2019. ರಂದು ಜರುಗಿದ ನಿಗಮದ 58ನೇ ಅಂದಾಜು ಪರಿಶೀಲನಾ ಸಮಿತಿಯ ಸಭೆಯಲ್ಲಿ ಮಂಡಿಸಲಾಗಿದ್ದು, ಸಮಿತಿಯು ಸದರಿ ಯೋಜನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಪ್ರಸ್ತಾವನೆಯನ್ನು ದಿನಾಂಕ:05.10.2020 ರಂದು ಜರುಗಿದ ನಿಗಮದ 93ನೇ ನಿರ್ದೇಶಕರ ಮಂಡಳಿ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ಸದರಿ ಪ್ರಸ್ತಾವನೆಯನ್ನು ರೂ.93.00 ಕೋಟಿಗಳಲ್ಲಿ ಕೈಗೆತ್ತಿಕೊಳ್ಳುವ ವಿವರವಾದ ಯೋಜನಾ ವರದಿಗೆ ಅನುಮೋದನೆ ನೀಡಿ, ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ

ಈ ಹಿನ್ನೆಲೆಯಲ್ಲಿ, ಕೊಪ್ಪಳ ಜಿಲ್ಲೆಯ, ಗಂಗಾವತಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಮುಕ್ಕುಂಪಿ ಕೆರೆ ಹಾಗೂ ಇತರೆ 05 ಕೆರೆಗಳಿಗೆ ತುಂಗಭದ್ರಾ ನದಿಯಿಂದ ದೇವಿಘಾಟ್/ವಿಪ್ರಾ ಸ್ಥಳದಿಂದ ನೀರು ತುಂಬಿಸುವ 2018-19 ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.93.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಸರ್ಕಾರವನ್ನು ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಜಸಂಇ 56 ಎಂಟಿಪಿ 2020, ಬೆಂಗಳೂರು,</u>**
**<u>ದಿನಾಂಕ: 17.06.2021</u>**

ಕೊಪ್ಪಳ ಜಿಲ್ಲೆಯ, ಗಂಗಾವತಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಮುಕ್ಕುಂಪಿ ಕೆರೆ ಹಾಗೂ ಇತರೆ 05 ಕೆರೆಗಳಿಗೆ ತುಂಗಭದ್ರಾ ನದಿಯಿಂದ ದೇವಿಘಾಟ್/ವಿಪ್ರಾ ಸ್ಥಳದಿಂದ ನೀರು ತುಂಬಿಸುವ, 2018-19 ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.93.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 102 ಆಕೋ-1/2020 (ಇ-ಆಫೀಸ್) ದಿನಾಂಕ:16.06.2021ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 12 ಎಂಸಿಎಂ 2021-ಪಿಪಿಡಿ, ದಿನಾಂಕ:29.01.2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

17/6/21

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲಸಂಪನ್ಮೂಲ ಇಲಾಖೆ

ಪ್ರತಿಯನ್ನು:

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಉಪಕಾರ್ಯದರ್ಶಿಗಳು (ಸಚಿವ ಸಂಪುಟ ಶಾಖೆ) ವಿಧಾನ ಸೌಧ.
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ನೀರಾವರಿ ಕೇಂದ್ರ ಮಲಯ, ಮುನಿರಾಬಾದ್.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯರ್ಶಿ, ಯೋಜನಾ ಇಲಾಖೆ.

10 ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
11 ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ), ಜಲಸಂಪನ್ಮೂಲ ಇಲಾಖೆ.
13 ತಾಂತ್ರಿಕ ಸಹಾಯಕರು, ತಾಂತ್ರಿಕ-6, ಜ.ಸಂ.ಇ.
14 ಶಾಖಾ ರಕ್ಷಾ, ಕಡತ/ಹೆಚ್ಚುವರಿ ಪ್ರತಿಗಳು.